ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ನೇಮಕಾತಿ/2022-23 ದಿನಾಂಕ 31.01.2023

**"ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ" ಇಲ್ಲಿ ಸಹಾಯಕ ವ್ಯವಸ್ಥಾಪಕರು (ಕಾರ್ಯಾಚರಣೆ), ಹಿರಿಯ ಸಹಾಯಕರು, ಕಿರಿಯ ಸಹಾಯಕರು ಮತ್ತು ಬೀಜ ಸಹಾಯಕರ ಹುದ್ದೆಗಳ ನೇರ ನೇಮಕಾತಿ ಅಡಿ ಖಾಲಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಸೂಚನೆ.**

ಕರ್ನಾಟಕ ನಾಗರೀಕ ಸೇವಾ ನೇರ ನೇಮಕಾತಿ, ಸಾಮಾನ್ಯ ನಿಯಾಮವಳಿಗಳು 2021ರ ನಿಯಮ ಉಪನಿಯಮ -7ರನ್ವಯ ಎಲ್ಲಾ ಅಭ್ಯರ್ಥಿಗಳು ಕನ್ನಡ ಭಾಷಾ ಪರೀಕ್ಷೆಗೆ ಹಾಜರಾಗುವುದು ಕಡ್ಡಾಯವಾಗಿರುತ್ತದೆ.

ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ ಇಲ್ಲಿ ಸಹಾಯಕ ವ್ಯವಸ್ಥಾಪಕರು (ಕಾರ್ಯಾಚರಣೆ), ಹಿರಿಯ ಸಹಾಯಕರು, ಕಿರಿಯ ಸಹಾಯಕರು ಮತ್ತು ಬೀಜ ಸಹಾಯಕರ ಹುದ್ದೆಗಳಿಗೆ, ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಪ್ರತಿಯೊಂದು ಹುದ್ದೆಗಳಿಗೆ ಪ್ರತ್ಯೇಕವಾದ ಪ್ರವೇಶ ಪತ್ರವನ್ನು ನೀಡಿದ್ದು, ಕನ್ನಡ ಭಾಷಾ ಪರೀಕ್ಷೆಗೆ ಪರೀಕ್ಷಾ ಕೇಂದ್ರವನ್ನು ನಮೂದಿಸಲಾಗಿದೆ.

ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು, ಕನ್ನಡ ಭಾಷಾ ಪರೀಕ್ಷೆಗೆ ಹಾಜರಾಗಲು ಯಾವುದಾದರೂ ಒಂದು ಪ್ರವೇಶ ಪತ್ರದೊಂದಿಗೆ (Hall Ticket)ಪ್ರವೇಶ ಪತ್ರದಲ್ಲಿ ನಮೂದಿಸಿರುವ ಪರೀಕ್ಷಾ ಕೇಂದ್ರಕ್ಕೆ ಹಾಜರಾಗತಕ್ಕದ್ದು.

ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮಾತ್ರ ಪರೀಕ್ಷೆ ಮುಗಿದ ನಂತರ ತಾವು ಡೌನ್ ಲೋಡ್ ಮಾಡಿಕೊಂಡಿರುವ ಎಲ್ಲಾ ಪ್ರವೇಶ ಪತ್ರಗಳ (Hall Ticket) ನಕಲುಗಳನ್ನು ಮತ್ತು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಲಭ್ಯಮಾಡಿರುವ ಅನುಬಂಧ-01ರಲ್ಲಿ ಅಭ್ಯರ್ಥಿಗಳ ವಿವರಗಳನ್ನು ಭರ್ತಿ ಮಾಡಿ ಕನ್ನಡ ಭಾಷಾ ಪರೀಕ್ಷೆಗೆ ಹಾಜರಗುವ ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಸಲ್ಲಿಸುವುದು.

**ಮೇಲ್ಕಂಡ ಅಂಶವನ್ನು ಸಂಬಂಧಪಟ್ಟ ಅಭ್ಯರ್ಥಿಗಳ ಮಾಹಿತಿಗಾಗಿ ತಿಳಿಸಲಾಗಿದೆ.**

ಸಹಿ/-
ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ**

**ಅನುಬಂಧ -1**

| ಕ್ರ.ಸ | ವಿವರಗಳು | ಷರಾ |
|---|---|---|
| 1. | ಅಭ್ಯರ್ಥಿಯ ಹೆಸರು | |
| 2. | ಅರ್ಜಿ ಸಂಖ್ಯೆ | |
| 3. | ಕನ್ನಡ ಭಾಷಾ ಪರೀಕ್ಷೆಗೆ ಹಾಜರಾದ ನೊಂದಣಿ ಸಂಖ್ಯೆ | |
| 4. | ಅರ್ಜಿ ಸಲ್ಲಿಸಿ ಪರೀಕ್ಷೆಗೆ "ಹಾಜರಾದ" ಹುದ್ದೆಗಳ ನೊಂದಣಿ ಸಂಖ್ಯೆ ಮಾತ್ರ ನಮೂದಿಸಿ | |
| | 1 ಸಹಾಯಕ ವ್ಯವಸ್ಥಾಪಕರು (ಕಾರ್ಯಾಚರಣೆ) ನೊಂದಣಿ ಸಂಖ್ಯೆ | |
| | 2 ಹಿರಿಯ ಸಹಾಯಕರು ನೊಂದಣಿ ಸಂಖ್ಯೆ | |
| | 3 ಕಿರಿಯ ಸಹಾಯಕರು ನೊಂದಣಿ ಸಂಖ್ಯೆ | |
| | 4 ಬೀಜ ಸಹಾಯಕರು ನೊಂದಣಿ ಸಂಖ್ಯೆ | |
| 5. | ವಿವಿಧ ಹುದ್ದೆಗಳಿಗೆ ಡೌನ್‌ಲೋಡ್ ಮಾಡಿಕೊಂಡಿರುವ ಪ್ರವೇಶ ಪತ್ರದ ನಕಲುಗಳನ್ನು ಲಗತ್ತಿಸುವುದು | |

ಸೂಚನೆ: ದಿನಾಂಕ 12-02-2023 ರಂದು ಹಾಜರಾಗುವ ಪರೀಕ್ಷಾ ಕೇಂದ್ರದಲ್ಲಿ ಅನುಬಂಧ-1 ಅನ್ನು ಕಡ್ಡಾಯವಾಗಿ ಸಲ್ಲಿಸುವುದು

ದಿನಾಂಕ: ಅಭ್ಯರ್ಥಿಯ ಸಹಿ

ಸ್ಥಳ: